# <u>ಕರ್ನಾಟಕವಿಧಾನಪರಿಷತ್ತು</u>

| | |
|---|---|
| ಚುಕ್ಕೆಗುರುತಿನಪ್ರಶ್ನೆಸಂಖ್ಯೆ | 780 |
| ಸದಸ್ಯರಹೆಸರು:- | ಶ್ರೀಜಗದೇವಗುತ್ತೇದಾರ್<br>(ವಿಧಾನಸಭೆಯಿಂದಚುನಾಯಿತರಾದವರು) |
| ಉತ್ತರಿಸಬೇಕಾದದಿನಾಂಕ:- | 16-12-2024 |
| ಉತ್ತರಿಸಬೇಕಾದಸಚಿವರು:- | ಮಾನ್ಯಆರೋಗ್ಯಮತ್ತುಕುಟುಂಬಕಲ್ಯಾಣಸಚಿವರು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯಲ್ಲಿ ಭ್ರೂಣ ಹತ್ಯೆ ಪ್ರಕರಣಗಳು ಜಾಸ್ತಿಯಾಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಜಿಲ್ಲಾವಾರು ಮಾಹಿತಿ ನೀಡುವುದು;</td><td>ಹೌದು, ರಾಜ್ಯದಲ್ಲಿ ಸ್ಕ್ಯಾನಿಂಗ್ ಸೆಂಟರ್ ಮತ್ತು ಆಸ್ಪತ್ರೆಗಳ ಮೇಲೆ ತಪಾಸಣೆಗಳನ್ನು ಜಾಸ್ತಿ ಮಾಡಿರುವುದರಿಂದ ಹೆಚ್ಚಿನ ಸಂಖ್ಯೆಯ ಭ್ರೂಣ ಹತ್ಯೆ ಪ್ರಕರಣಗಳು ಕಂಡುಹಿಡಿಯಲಾಗಿದೆ ಹಾಗೂ ಸರ್ಕಾರಕ್ಕೆ ವರದಿಯಾಗುತ್ತಿದೆ.<br><br>2023-24 ಮತ್ತು 2024-25 ನೇ ಸಾಲಿನಲ್ಲಿ ಭ್ರೂಣಹತ್ಯೆಪ್ರಕರಣಜಿಲ್ಲಾವಾರು ವಿವರ ಕೆಳಗಿನಂತಿರುತ್ತವೆ.
<table>
<tr><th>ಕ್ರ. ಸಂ</th><th>ಜಿಲ್ಲೆಯ ಹೆಸರು</th><th>ಆಸ್ಪತ್ರೆಯ ವಿವರ</th><th>ಪಿ.ಸಿ.ಆರ್. ಸಂಖ್ಯೆ</th><th>ಕ್ರೈಂ ಸಂಖ್ಯೆ</th></tr>
<tr><td>1</td><td colspan="2">ಬೈಯಪ್ಪನಹಳ್ಳಿ ಪೋಲೀಸ್ ಠಾಣೆಯ ಸಿಬ್ಬಂದಿಯವರಿಂದ ಹಳೆ ಮದ್ರಾಸ್ ರಸ್ತೆಯಲ್ಲಿ ವಾಹನಗಳ ತಪಾಸಣೆಯ ಸಮಯದಲ್ಲಿ ದೊರೆತ ಮಾಹಿತಿಯ ಪ್ರಕಾರ ತನಿಖೆಯಿಂದ ಮಂಡ್ಯ ಜಿಲ್ಲೆಯಲ್ಲಿ ದಾಖಲಾದ ಪ್ರಕರಣ</td><td>289/2024</td><td></td></tr>
<tr><td>2</td><td>ಬೈಯಪ್ಪನಹಳ್ಳಿ ಪೋಲಿಸ್‌ರ ತನಿಖೆಯ ಮುಂದುವರೆದ ಭಾಗವಾಗಿ ಮೈಸೂರು ಜಿಲ್ಲೆಯ ಕೃತ್ಯವೆಸದ ಸ್ಥಳ</td><td>ಮಾತಾ ಆಸ್ಪತ್ರೆ, ಮೈಸೂರು</td><td></td><td>0065/2024</td></tr>
<tr><td>3</td><td>ಬೆಂಗಳೂರು ಗ್ರಾಮಾಂತರ</td><td>ಎಸ್.ಪಿ.ಜಿ. ಆಸ್ಪತ್ರೆ ಮತ್ತು ಡಯಾಗ್ನೋಸ್ಟಿಕ್ ಸೆಂಟರ್, ತಿರುಮಲಶೆಟ್ಟಿ ಹೊಸಕೋಟೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ</td><td>10250/2023</td><td>0195/2023</td></tr>
<tr><td>4</td><td rowspan="2">ಬೆಂಗಳೂರು ಗ್ರಾಮಾಂತರ</td><td>ಓವಂ ಆಸ್ಪತ್ರೆ, ಹೊಸಕೋಟೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ</td><td>2407/2024</td><td>0088/2024</td></tr>
<tr><td>5</td><td>ಆಸರೆ ಆಸ್ಪತ್ರೆ, ನೆಲಮಂಗಲ, ಬೆಂಗಳೂರು ಗ್ರಾಮಾಂತರ</td><td></td><td>0034/2024</td></tr>
<tr><td>6</td><td rowspan="3">ಮಂಡ್ಯ</td><td>ಖಾಸಗಿ ಮನೆ, ಮೇಲುಕೋಟೆ</td><td></td><td>0063/2024</td></tr>
<tr><td>7</td><td>ಖಾಸಗಿ ಮನೆ, ವಿ.ಸಿ. ಕಾಲೋನಿ</td><td></td><td>0102/2024</td></tr>
<tr><td>8</td><td>ಖಾಸಗಿ ಮನೆ, ಬೆಳ್ಳೂರು ಕ್ರಾಸ್, ನಾಗಮಂಗಲ</td><td></td><td>0151/2024</td></tr>
</table></td></tr>
<tr><td>ಆ</td><td>ರಾಜ್ಯದಲ್ಲಿ ಸರ್ಜರಿ ಮೂಲಕ ಹೆರಿಗಗಳಾಗುತ್ತಿರುವ ಶೇಕಡ ಪ್ರಮಾಣ ಎಷ್ಟು; ಅನಗತ್ಯ ಸರ್ಜರಿ ನಡೆಯುವ ಹೆರಿಗೆಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು (ವಿವರಿಸುವುದು)</td><td>ರಾಜ್ಯದಲ್ಲಿ ಸರ್ಜರಿ ಮೂಲಕ ಹೆರಿಗೆಗಳಾಗುತ್ತಿರುವ ಒಟ್ಟು ಶೇಕಡ ಪ್ರಮಾಣ 46 ರಷ್ಟು ಇರುತ್ತದೆ.<br>• ಸರ್ಕಾರಿಆಸ್ಪತ್ರೆಗಳಲ್ಲಿ 36%<br>• ಖಾಸಗಿಆಸ್ಪತ್ರೆಗಳಲ್ಲಿ 61%<br><br>ಅನಗತ್ಯ ಸೀಜೇರಿಯನ್ ಹೆರಿಗೆಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳ ಮಾಹಿತಿಯನ್ನು ಅನುಬಂಧ-1ರಲ್ಲಿ ಲಗತ್ತಿಸಿದೆ</td></tr>
<tr><td>ಇ</td><td>ಇಲ್ಲಿಯವರೆಗೆ ಭ್ರೂಣ ಹತ್ಯೆ ಪ್ರಕರಣಗಳಲ್ಲಿ ಭಾಗಿಯಾದವರ ಸಂಖ್ಯೆ ಎಷ್ಟು; ಇವರುಗಳ ವಿರುದ್ಧ</td><td>ಭ್ರೂಣ ಹತ್ಯೆ ಪ್ರಕರಣಗಳಿಗೆ ಸಂಬಂಧಪಟ್ಟಂತೆ ಒಟ್ಟು 08 ಪ್ರಕರಣಗಳು ದಾಖಲಾಗಿರುತ್ತದೆ. ಈ ಪ್ರಕರಣಗಳಲ್ಲಿ ಒಟ್ಟು 46 ಜನರನ್ನು ಬಂಧಿಸಲಾಗಿದೆ. ವಿವರಗಳನ್ನು ಅನುಬಂಧ-2ರಲ್ಲಿ ಲಗತ್ತಿಸಿದೆ.</td></tr>
</table>

<table>
<tr><td></td><td>ತೆಗೆದುಕೊಂಡ ಕ್ರಮಗಳೇನು;</td><td></td></tr>
<tr><td>ಈ</td><td>ರಾಜ್ಯದಲ್ಲಿ ಭ್ರೂಣ ಹತ್ಯೆ ತಡೆಗಟ್ಟಲು ಸರ್ಕಾರವು ತೆಗೆದುಕೊಳ್ಳುವ ಕ್ರಮಗಳೇನು? (ವಿವರಿಸುವುದು)</td><td>
ಭ್ರೂಣ ಹತ್ಯೆ ತಡೆಯಲು ಸರ್ಕಾರವು ಕೆಳಕಾಣಿಸಿದಂತೆ ಕ್ರಮಗಳನ್ನು ಕೈಗೊಂಡಿದೆ.
<ul>
<li>ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯಡಿ ಬರುವ ಎಲ್ಲಾ ಶಾಸನಬದ್ಧ ಸಮಿತಿಗಳು ರಾಜ್ಯ ಮತ್ತು ಜಿಲ್ಲೆಗಳಲ್ಲಿ ರಚನೆಗೊಂಡಿರುತ್ತದೆ.</li>
<li>2018 ರಿಂದರಾಜ್ಯದಲ್ಲಿ"ಬಾಲಿಕಾ" ಆನ್‌ಲೈನ್ ಸಾಫ್ಟ್‌ವೇರ್ ಮುಖಾಂತರ ಎಲ್ಲಾ ಸ್ಕ್ಯಾನಿಂಗ್ ಸೆಂಟರ್‌ಗಳನ್ನು ಕಡ್ಡಾಯವಾಗಿ ನೋಂದಣಿ ಮತ್ತು ನವೀಕರಣ ನಡೆಸಲಾಗುತ್ತಿದೆ.</li>
<li>ರಾಜ್ಯ ಮಟ್ಟದಲ್ಲಿ ಶೇ.100 ರಷ್ಟು ಗರ್ಭಿಣಿಯರ ನೊಂದಣಿ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ಗ್ರಾಮ ಮಟ್ಟದಲ್ಲಿ ಜನನ ಸಮಯದ ಲಿಂಗಾನುಪಾತದ ದತ್ತಾಂಶಗಳನ್ನು ಮಾಹಿತಿ ತಂತ್ರಜ್ಞಾನದ ಮುಖಾಂತರ ಮೇಲ್ವಿಚಾರಣೆ ಮಾಡಲು ಕಲ್ಪಿಸಲಾಗುತ್ತಿದೆ.</li>
<li>ರಾಜ್ಯದಲ್ಲಿ ಇದುವರೆಗೂ ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯನ್ನು ಉಲ್ಲಂಘಿಸಿರುವ ಸ್ಕ್ಯಾನಿಂಗ್ ಸೆಂಟರ್ / ಮಾಲೀಕರು/ ವೈದ್ಯರ ವಿರುದ್ಧ ಒಟ್ಟು 136 ಪ್ರಕರಣಗಳನ್ನು ನ್ಯಾಯಾಲಯದಲ್ಲಿ ದಾವೆ ಹೂಡಲಾಗಿದ್ದು, 74 ಪ್ರಕರಣಗಳು ದಂಡವಿಧಿಸಿ ಖುಲಾಸೆಗೊಂಡಿದ್ದು, 65 ಪ್ರಕರಣಗಳು ನ್ಯಾಯಾಲಯದಲ್ಲಿ ವಿವಿಧ ಹಂತದಲ್ಲಿ ಬಾಕಿಯಿರುತ್ತದೆ.</li>
<li>ದಿನಾಂಕ: 11-12-2023 ರಂದು ನಡೆದ ರಾಜ್ಯ ಮೇಲ್ವಿಚಾರಣಾ ಮಂಡಳಿಯ ಸಭೆಯಲ್ಲಿ ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆ ಮಾಡುವಂತಹ ಸ್ಕ್ಯಾನಿಂಗ್ ಸೆಂಟರ್ / ಆಸ್ಪತ್ರೆ/ ವೈದ್ಯರು / ದಲ್ಲಾಳಿಗಳು / ಗರ್ಭಿಣಿಯರ ಸಂಬಂಧಿಕರ ವಿರುದ್ಧ ಮಾಹಿತಿ ನೀಡಿ, ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲು ಸಹಕರಿಸುವ ಮಾಹಿತಿದಾರರಿಗೆ ಕರ್ನಾಟಕ ಸರ್ಕಾರದಿಂದ ನೀಡುತ್ತಿದ್ದ ಬಹುಮಾನವನ್ನು ರೂ.50,000/-ಗಳಿಂದ ರೂ.1,00,000/-ಗಳಿಗೆ ಹೆಚ್ಚಿಸಲಾಗಿದೆ.</li>
<li>ಸರ್ಕಾರಿ ಆದೇಶ ಸಂಖ್ಯೆ: ಆಕುಕ 01 ಎಫ್.ಪಿ.ಇ. 2024, ಬೆಂಗಳೂರು, ದಿನಾಂಕ: 03.01.2024 ರಂದು ಪಿ.ಸಿ. & ಪಿ.ಎನ್.ಡಿ.ಟಿ. ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಆಯುಕ್ತರ ಅಧ್ಯಕ್ಷತೆಯಲ್ಲಿ ರಾಜ್ಯ ಕಾರ್ಯಪಡೆಯನ್ನು ರಚಿಸಲಾಗಿದೆ.</li>
<li>ರಾಜ್ಯ ಮಟ್ಟದಿಂದ ಕೆಳಕಾಣಿಸಿದಂತೆ ಜಿಲ್ಲೆಗಳಲ್ಲಿ ಯಶಸ್ವಿಗೊಂಡ ಗುಪ್ತ ಕಾರ್ಯಚಾರಣೆಯನ್ನು ಕೈಗೊಳ್ಳಲಾಗಿದೆ.</li>
</ul>
<table>
<tr><th>ಕ್ರ. ಸಂ</th><th>ಜಿಲ್ಲೆಯ ಹೆಸರು</th><th>ಆಸ್ಪತ್ರೆಯ ಹೆಸರು</th><th>ಗುಪ್ತ ಕಾರ್ಯಚಾರಣೆ ನಡೆಸಿದ ದಿನಾಂಕ</th></tr>
<tr><td>1</td><td>ಬೆಂಗಳೂರು ಗ್ರಾಮಾಂತರ</td><td>ಎಸ್.ಪಿ.ಜಿ ಆಸ್ಪತ್ರೆ</td><td>13-12-2023</td></tr>
<tr><td>2</td><td>ಬೆಳಗಾವಿ</td><td>ಇಕ್ರಾ ಆಸ್ಪತ್ರೆ, ಗೋಕಾಕ</td><td>15-07-2024</td></tr>
<tr><td>3</td><td>ಮಂಡ್ಯ</td><td>ಖಾಸಗಿ ಮನೆ, ನಾಗಮಂಗಲ</td><td>15-08-2024</td></tr>
<tr><td>4</td><td>ಕೋಲಾರ</td><td>ದೀಪಕ್ ನರ್ಸಿಂಗ್ ಹೋಂ</td><td>29-10-2024</td></tr>
</table>
ಪಿ.ಸಿ & ಪಿ.ಎನ್.ಡಿ.ಟಿ. ಕಾಯ್ದೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕೆಳಕಾಣಿಸಿದಂತೆ ಅರಿವು ಮೂಡಿಸಲಾಗುತ್ತಿದೆ.
<ul>
<li>2023-24 ನೇ ಸಾಲಿನಲ್ಲಿ ಬಸ್ ಬ್ರ್ಯಾಡಿಂಗ್, ಟ್ರೈನ್ ಬ್ರ್ಯಾಡಿಂಗ್, ಹೋರ್ಡಿಂಗ್ಸ್, ಗೋಡೆ ಬರಹ, ರೇಡಿಯೋ ಜಿಂಗಲ್ಸ್, ಟಿ.ವಿ. ಸ್ಪಾಟ್ಸ್ ಮುಖಾಂತರ ಸಾರ್ವಜನಿಕರಿಗೆ ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆಯ ಕುರಿತು ಅರಿವು ಮೂಡಿಸಲಾಗುತ್ತಿದೆ.</li>
<li>ದಿನಾಂಕ: 18-02-2024 ರಂದು ಜೀ ಕನ್ನಡ ಚಾನೆಲ್‌ನ ಡ್ರಾಮಾ ಜೂನಿಯಸ್ ಕಾರ್ಯಕ್ರಮದಲ್ಲಿ "ಹೆಣ್ಣು ಭ್ರೂಣ ಹತ್ಯೆ ಮಾಡದಂತೆ" ಸಾರ್ವಜನಿಕರಲ್ಲಿ ಜನಜಾಗೃತಿ ಹಾಗೂ ಅರಿವು ಮೂಡಿಸುವ ಕಾರ್ಯಕ್ರಮವನ್ನು ನಡೆಸಲಾಯಿತು.</li>
<li>ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯ ಬಗ್ಗೆ ರಾಜ್ಯ ಮಟ್ಟದಿಂದ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಕಾಲಾನುಕಾಲಕ್ಕೆ ಅರಿವು ಮೂಡಿಸುವ ಕಾರ್ಯಗಾರವನ್ನು ನಡೆಸಲಾಗುತ್ತಿದೆ.</li>
</ul>
</td></tr>
</table>

**ಆಕುಕ 81 ಎಸ್ ಟಿಕ್ಯೂ 2024**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**

[redacted] ಅನುಬಂಧ - 1

**ಅನುಬಂಧ-1(ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ-780)**

ರಾಜ್ಯದಲ್ಲಿ ಹೆಚ್ಚುತ್ತಿರುವ ಅನಗತ್ಯ ಸಿಜೇರಿಯನ್ ಹೆರಿಗೆಗಳನ್ನು ಪರಿಹರಿಸಲು ಕರ್ನಾಟಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೈಗೊಂಡ ಕ್ರಮಗಳು.

1. ತಾಲ್ಲೂಕು ಮಟ್ಟದ ಆಸ್ಪತ್ರೆಗಳನ್ನು 24X7 ಪ್ರಸೂತಿ ಸೇವೆಗಳನ್ನು ನೀಡಲು ಬಲಪಡಿಸಲಾಗುತ್ತಿದೆ. ರಾತ್ರಿ ವೇಳೆಯಲ್ಲಿ ಸಹಜ ಹೆರಿಗೆಗಳನ್ನು ಮತ್ತು ಅವಶ್ಯವಿದ್ದಲ್ಲಿ ಸಿಜೇರಿಯನ್ ಶಸ್ತ್ರಚಿಕಿತ್ಸೆ ನಡೆಸಲು ಅನುಕೂಲ ವಾಗುತ್ತಿದೆ , ಈ ಕ್ರಮದಿಂದ ತಾಲ್ಲೂಕು ಮಟ್ಟದಿಂದ ಜಿಲ್ಲಾ ಮಟ್ಟಕ್ಕೆ ಶಿಫಾರಸ್ಸುಗೊಳ್ಳುವ ಸಂಖ್ಯೆಯು ಕಡಿಮೆ ಆಗಲಿದ್ದು ಅನಗತ್ಯ ಸಿಜೇರಿಯನ್ ಶಸ್ತ್ರಚಿಕಿತ್ಸೆಗೆ ಕಡಿವಾಣ ಹಾಕಲಾಗುತ್ತಿದೆ.
2. ಪ್ರತ್ಯೇಕ ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳನ್ನು ತೆರೆಯಲಾಗಿರುತ್ತದೆ. ಇದವರೆಗೂ, 88 ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳು ಮಂಜೂರಾಗಿದ್ದು ಅದರಲ್ಲಿ 60 ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳು ಕಾರ್ಯ ನಿರ್ವಹಿಸುತ್ತಿರುತ್ತವೆ. 24X7 ಸಮಗ್ರ ಪ್ರಸೂತಿ ಸೇವೆಗಳನ್ನು ನೀಡಲಾಗುತ್ತಿದೆ. ಈ ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳಲ್ಲಿ ಪ್ರತ್ಯೇಕ ಸಿಬ್ಬಂದಿಯು ಮತ್ತು ನುರಿತ ತಾಯಿ ಮತ್ತು ಮಕ್ಕಳ ತಜ್ಞರು ಇರುವುದರಿಂದ 24X7 ಸಹಜ ಹೆರಿಗೆ ನಡೆಸಲು ಉತ್ತೇಜಿಸಲಾಗುತ್ತಿದೆ.
3. ಸಹಜ ಹೆರಿಗೆಗಳನ್ನು ಹೆಚ್ಚಿಸಲು ಹಾಗು ಸಿಜೇರಿಯನ್ ಶಸ್ತ್ರಚಿಕಿತ್ಸೆ ಕಡಿಮೆ ಮಾಡಲು Midwifery ಯೋಜನೆಯನ್ನು ಪ್ರಾರಂಭಿಸಲಾಗಿದೆ ಈ ಯೋಜನೆಯಲ್ಲಿ ಶುಶ್ರೂಷಧಿಕಾರಿಗಳಿಗೆ 18 ತಿಂಗಳ ತರಬೇತಿಯನ್ನು Midwifery ಯೋಜನೆಯಲ್ಲಿ ಪಡೆದು MLCU ಹೆರಿಗೆ ಕೋಣೆಯಲ್ಲಿ ಸಹಜ ಹೆರಿಗೆಗಳನ್ನು ನೆರವೇರಿಸಲು ತಜ್ಞತೆಯನ್ನು ಹೊಂದಿರುತ್ತಾರೆ ಪ್ರಸ್ತುತ ತರಬೇತುದಾರರ ತರಬೇತಿಯನ್ನು ಬೆಂಗಳೂರಿನ ವಾಣಿ ವಿಲಾಸ ಆಸ್ಪತ್ರೆಯಲ್ಲಿ ಮತ್ತು ಹೈದರಬಾದಿನ Fernandez Foundation ನಲ್ಲಿ ಪೂರ್ಣಗೊಳಿಸಿ ಬೆಂಗಳೂರು, ಮೈಸೂರು ಮತ್ತು ಬೆಳಗಾವಿಯಲ್ಲಿ ಶುಶ್ರೂಷಧಿಕಾರಿಗಳಿಗೆ 18 ತಿಂಗಳ ತರಬೇತಿಯನ್ನು ನೀಡುತ್ತಿದ್ದಾರೆ.
4. ಮೈಸೂರಿನ ಚೆಲುವಾಂಬ ಆಸ್ಪತ್ರೆಯಲ್ಲಿ ನಡೆಸಲಾಗುತ್ತಿರುವ 18 ತಿಂಗಳ ಶುಶ್ರೂಷಧಿಕಾರಿಗಳ ತರಬೇತಿಯಲ್ಲಿ 12 ತಿಂಗಳು ಪೂರ್ಣಗೊಂಡಿದ್ದು, ಇನ್ನು 6 ತಿಂಗಳಲ್ಲಿ ತರಬೇತಿ ಮುಗಿಯಲಿದ್ದು ಜುಲೈ-2025 ರಿಂದ ಹಾಸನ, ಮಂಡ್ಯ ಮತ್ತು ಮೈಸೂರಿನ ಜಿಲ್ಲಾ ಆಸ್ಪತ್ರೆಯಲ್ಲಿ MLCU ಕಾರ್ಯಾರಂಭ ಮಾಡಲಿದೆ.
5. ಬೆಂಗಳೂರಿನಲ್ಲಿ ವಾಣಿ ವಿಲಾಸ ಆಸ್ಪತ್ರೆ ಯಲ್ಲಿ ಬೆಂಗಳೂರು ವಿಭಾಗಕ್ಕೆ ಸಂಬಂಧಿಸಿದಂತೆ 25 ಶುಶ್ರೂಷಧಿಕಾರಿಗಳು NPM ತರಬೇತಿಯನ್ನು ಜುಲೈ-2024 ರಲ್ಲಿ ಪ್ರಾರಂಭಿಸಲಾಗಿದ್ದು, ಡಿಸಂಬರ್ 2025 ರ ವರೆಗೆ 18 ತಿಂಗಳ ತರಬೇತಿಯು ಮುಗಿಯಲಿದ್ದು ತದನಂತರ ಕೋಲಾರ, ಬೆಂಗಳೂರು, ದಾವಣಗೆರೆ ಮತ್ತು ತುಮಕೂರು ಜಿಲ್ಲಾ ಆಸ್ಪತ್ರೆಗಲ್ಲಿ MLCU ಪ್ರಾರಂಭಗೊಳ್ಳುತ್ತದೆ.
6. ಬೆಳಗಾವಿ ಜಿಲ್ಲೆಯಲ್ಲಿ 18 ತಿಂಗಳ ತರಬೇತಿಯು ಡಿಸೆಂಬರ್ – 2024 ರಿಂದ ಪ್ರಾರಂಭಿಸಲಾಗಿದ್ದು, ಒಟ್ಟು 24 ಶುಶ್ರೂಷಧಿಕಾರಿಗಳಿಗೆ ತರಬೇತಿ ನೀಡಲಾಗುವುದು ತದ ನಂತರ ಬೆಳಗಾವಿ, ಹುಬ್ಬಳ್ಳಿ ಮತ್ತು ಗಂಗಾವತಿ ಯಲ್ಲಿ MLCU ಪ್ರಾರಂಭಗೊಳ್ಳಲಿದೆ.
7. ಪ್ರತಿ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಯಲ್ಲಿ ಸಿಜೇರಿಯನ್ ಶಸ್ತ್ರಚಿಕಿತ್ಸೆ ಯ ಕಡಿವಾಣ ಹಾಕಲು ಸಿಜೇರಿಯನ್ ಆಡಿಟ್ ಆಸ್ಪತ್ರೆಯಲ್ಲಿ ಮಾಡಲಾಗುತ್ತಿದೆ ಈ ಆಡಿಟ್ ನಿಂದ ಪ್ರತಿ ಸಿಜೇರಿಯನ್ ಶಸ್ತ್ರಚಿಕಿತ್ಸೆ ಅಗತ್ಯತೆ ಹಾಗು ಅನಗತ್ಯತೆ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಿ ಸಿಜೇರಿಯನ್ ಶಸ್ತ್ರಚಿಕಿತ್ಸೆ ತಡೆಗಟ್ಟಲು ಕ್ರಮವಹಿಸಲಾಗುತ್ತಿದೆ.
8. ಪ್ರತಿ ತಿಂಗಳು ಸಿಜೇರಿಯನ್ ಶಸ್ತ್ರಚಿಕಿತ್ಸೆಯ ಅನಗತ್ಯ ಶಸ್ತ್ರಚಿಕಿತ್ಸೆ ತಡೆಯಲು ಜಿಲ್ಲಾ ಮಟ್ಟದಲ್ಲಿ ಪರಿಶೀಲನಾ ಸಭೆಗಳನ್ನು ನಡೆಸಲಾಗುತ್ತಿದೆ.
9. ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಸೂತಿ ತಜ್ಞರುಗಳಿಗೆ ಮತ್ತು ಶುಶ್ರೂಷಕರುಗಳಿಗೆ ಹೆರಿಗೆ ಸಮಯದಲ್ಲಿನ ಆರೈಕೆ ಮತ್ತು ಪ್ರಸವದ ನಂತರದ ಆರೈಕೆಗೆ ಸಂಬಂಧಿಸಿದ ಕೌಶಲ್ಯವನ್ನು ಹೆಚ್ಚಿಸಲು 3 ದಿನಗಳ ದಕ್ಷತಾ ತರಬೇತಿಯನ್ನು 2018 ರಿಂದ ನೀಡಲಾಗುತ್ತಿದೆ. ಇದರಿಂದ ಸಿಜೇರಿಯನ್ ಶಸ್ತ್ರಚಿಕಿತ್ಸೆ ಯನ್ನು ನಿಯಂತ್ರಿಸಲು ಸಹಾಯವಾಗುತ್ತಿದೆ.

ಉಪನಿರ್ದೇಶಕರು (ತಾಯಿ ಆರೋಗ್ಯ)
ಆರೋಗ್ಯ ಮತ್ತು ಕು.ಕ. ಸೇವೆಗಳ ನಿರ್ದೇಶನಾಲಯ

ಅನುಬಂಧ - 2

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಜಗದೇವ ಗುತ್ತೇದಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)ಚುಕ್ಕೆ ಗುರುತಿನ ಪ್ರಶ್ನೆ : 780 ಗೆ ~~ಪೂರಕ ಟಿಪ್ಪಣಿ~~**

ಹೌದು, ರಾಜ್ಯದಲ್ಲಿ ಸ್ಕ್ಯಾನಿಂಗ್ ಸೆಂಟರ್ ಮತ್ತು ಆಸ್ಪತ್ರೆಗಳ ಮೇಲೆ ತಪಾಸಣೆಗಳನ್ನು ಜಾಸ್ತಿ ಮಾಡಿರುವುದರಿಂದ ಹೆಚ್ಚಿನ ಸಂಖ್ಯೆಯ ಭ್ರೂಣ ಹತ್ಯೆ ಪ್ರಕರಣಗಳು ಕಂಡುಹಿಡಿಯಲಾಗಿದೆ ಹಾಗೂ ಸರ್ಕಾರಕ್ಕೆ ವರದಿಯಾಗುತ್ತಿದೆ.

2023-24 ಮತ್ತು 2024-25 ನೇ ಸಾಲಿನಲ್ಲಿ ಭ್ರೂಣ ಹತ್ಯೆ ಪ್ರಕರಣ ಜಿಲ್ಲಾವಾರು ವಿವರ ಕೆಳಗಿನಂತಿರುತ್ತವೆ.

| ಕ್ರ. ಸಂ | ಜಿಲ್ಲೆಯ ಹೆಸರು | ಆಸ್ಪತ್ರೆಯ ವಿವರ | ಪಿ.ಸಿ.ಆರ್. ಸಂಖ್ಯೆ | ಕ್ರೈಂ ಸಂಖ್ಯೆ |
|---|---|---|---|---|
| 1 | ಬೈಯಪ್ಪನಹಳ್ಳಿ ಪೊಲೀಸ್ ಠಾಣೆಯ ಸಿಬ್ಬಂದಿಯವರಿಂದ ಹಳೆ ಮದ್ರಾಸ್ ರಸ್ತೆಯಲ್ಲಿ ವಾಹನಗಳ ತಪಾಸಣೆಯ ಸಮಯದಲ್ಲಿ ದೊರೆತ ಮಾಹಿತಿಯ ಪ್ರಕಾರ ತನಿಖೆಯಿಂದ **ಮಂಡ್ಯ** ಜಿಲ್ಲೆಯಲ್ಲಿ ದಾಖಲಾದ ಪ್ರಕರಣ | | 289/2024 | |
| 2 | ಬೈಯಪ್ಪನಹಳ್ಳಿ ಪೊಲೀಸ್ ರ ತನಿಖೆಯ ಮುಂದುವರೆದ ಭಾಗವಾಗಿ **ಮೈಸೂರು** ಜಿಲ್ಲೆಯ ಕೃತ್ಯವೆಸಗ ಸ್ಥಳ | ಮಾತಾ ಆಸ್ಪತ್ರೆ, ಮೈಸೂರು | | 0065/2024 |
| 3 | ಬೆಂಗಳೂರು ಗ್ರಾಮಾಂತರ | ಎಸ್.ಪಿ.ಜಿ. ಆಸ್ಪತ್ರೆ ಮತ್ತು ಡಯಾಗ್ನೋಸ್ಟಿಕ್ ಸೆಂಟರ್, ತಿರುಮಲಶೆಟ್ಟಿ, ಹೊಸಕೋಟೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ | 10250/2023 | 0195/2023 |
| 4 | ಬೆಂಗಳೂರು ಗ್ರಾಮಾಂತರ | ಓಂ ಆಸ್ಪತ್ರೆ, ಹೊಸಕೋಟೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ | 2407/2024 | 0088/2024 |
| 5 | | ಆಸರೆ ಆಸ್ಪತ್ರೆ, ನೆಲಮಂಗಲ, ಬೆಂಗಳೂರು ಗ್ರಾಮಾಂತರ | | 0034/2024 |
| 6 | ಮಂಡ್ಯ | ಖಾಸಗಿ ಮನೆ, ಮೇಲುಕೋಟೆ | | 0063/2024 |
| 7 | | ಖಾಸಗಿ ಮನೆ, ವಿ.ಸಿ. ಕಾಲೋನಿ | | 0102/2024 |
| 8 | | ಖಾಸಗಿ ಮನೆ, ಬೆಳ್ಳೂರು ಕ್ರಾಸ್ , ನಾಗಮಂಗಲ | | 0151/2024 |

ಮೇಲೆ ತಿಳಿಸಲಾದ ಪ್ರಕರಣಗಳಲ್ಲಿ ಒಟ್ಟು 46 ಜನರನ್ನು ಬಂಧಿಸಲಾಗಿದೆ.

**ಭ್ರೂಣ ಹತ್ಯೆ ತಡೆಯಲು ಸರ್ಕಾರವು ಕೆಳಕಾಣಿಸಿದಂತೆ ಕ್ರಮಗಳನ್ನು ಕೈಗೊಂಡಿದೆ.**

- ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯಡಿ ಬರುವ ಎಲ್ಲಾ ಶಾಸನಬದ್ಧ ಸಮಿತಿಗಳು ರಾಜ್ಯ ಮತ್ತು ಜಿಲ್ಲೆಗಳಲ್ಲಿ ರಚನೆಗೊಂಡಿರುತ್ತದೆ.
- 2018 ರಿಂದ ರಾಜ್ಯದಲ್ಲಿ "ಬಾಲಿಕಾ" ಆನ್‌ಲೈನ್ ಸಾಫ್ಟ್‌ವೇರ್ ಮುಖಾಂತರ ಎಲ್ಲಾ ಸ್ಕ್ಯಾನಿಂಗ್ ಸೆಂಟರ್‌ಗಳನ್ನು ಕಡ್ಡಾಯವಾಗಿ ನೋಂದಣಿ ಮತ್ತು ನವೀಕರಣ ನಡೆಸಲಾಗುತ್ತಿದೆ.
- ರಾಜ್ಯ ಮಟ್ಟದಲ್ಲಿ ಶೇ. 100 ರಷ್ಟು ಗರ್ಭಿಣಿಯರ ನೊಂದಣಿ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ಗ್ರಾಮ ಮಟ್ಟದಲ್ಲಿ ಜನನ ಸಮಯದ ಲಿಂಗಾನುಪಾತದ ದತ್ತಾಂಶಗಳನ್ನು ಮಾಹಿತಿ ತಂತ್ರಜ್ಞಾನದ ಮುಖಾಂತರ ಮೇಲ್ವಿಚಾರಣೆ ಮಾಡಲು ಕಲ್ಪಿಸಲಾಗುತ್ತಿದೆ.
- ರಾಜ್ಯದಲ್ಲಿ ಇದುವರೆಗೂ ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯನ್ನು ಉಲ್ಲಂಘಿಸಿರುವ ಸ್ಕ್ಯಾನಿಂಗ್ ಸೆಂಟರ್ / ಮಾಲೀಕರು/ ವೈದ್ಯರ ವಿರುದ್ಧ ಒಟ್ಟು 136 ಪ್ರಕರಣಗಳನ್ನು ನ್ಯಾಯಾಲಯದಲ್ಲಿ ದಾವೆ ಹೂಡಲಾಗಿದ್ದು, 74 ಪ್ರಕರಣಗಳು ದಂಡವಿಧಿಸಿ ಖುಲಾಸೆಗೊಂಡಿದ್ದು, 65 ಪ್ರಕರಣಗಳು ನ್ಯಾಯಾಲಯದಲ್ಲಿ ವಿವಿಧ ಹಂತದಲ್ಲಿ ಬಾಕಿಯಿರುತ್ತದೆ.

- ದಿನಾಂಕ: 11-12-2023 ರಂದು ನಡೆದ ರಾಜ್ಯ ಮೇಲ್ವಿಚಾರಣಾ ಮಂಡಳಿಯ ಸಭೆಯಲ್ಲಿ ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆ ಮಾಡುವಂತಹ ಸ್ಕ್ಯಾನಿಂಗ್ ಸೆಂಟರ್ / ಆಸ್ಪತ್ರೆ/ ವೈದ್ಯರು / ದಲ್ಲಾಳಿಗಳು / ಗರ್ಭಿಣಿಯರ ಸಂಬಂಧಿಕರ ವಿರುದ್ಧ ಮಾಹಿತಿ ನೀಡಿ, ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲು ಸಹಕರಿಸುವ ಮಾಹಿತಿದಾರರಿಗೆ ಕರ್ನಾಟಕ ಸರ್ಕಾರದಿಂದ ರೂ. 50,000/- ಕ್ಕೆ ಇದ್ದ ಬಹುಮಾನವನ್ನು ರೂ.1,00,000/- ಗಳಿಗೆ ಏರಿಸಲಾಗಿದೆ.
- ಸರ್ಕಾರಿ ಆದೇಶ ಸಂಖ್ಯೆ: ಆಕುಕ 01 ಎಫ್‌ಪಿಇ 2024, ಬೆಂಗಳೂರು, ದಿನಾಂಕ: 03.01.2024 ರಂದು ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಆಯುಕ್ತರ ಅಧ್ಯಕ್ಷತೆಯಲ್ಲಿ ರಾಜ್ಯ ಕಾರ್ಯಪಡೆಯನ್ನು ರಚಿಸಲಾಗಿದೆ.
- ರಾಜ್ಯ ಮಟ್ಟದಿಂದ ಕೆಳಕಾಣಿಸಿದಂತೆ ಜಿಲ್ಲೆಗಳಲ್ಲಿ ಯಶಸ್ವಿಗೊಂಡ ಗುಪ್ತಕಾರ್ಯಾಚರಣೆಯನ್ನು ಕೈಗೊಳ್ಳಲಾಗಿದೆ.

| ಕ್ರ. ಸಂ | ಜಿಲ್ಲೆಯ ಹೆಸರು | ಆಸ್ಪತ್ರೆಯ ಹೆಸರು | ಗುಪ್ತಕಾರ್ಯಾಚರಣೆ ನಡೆಸಿದ ದಿನಾಂಕ |
|---|---|---|---|
| 1 | ಬೆಂಗಳೂರು ಗ್ರಾಮಾಂತರ | ಎಸ್.ಪಿ.ಜಿ ಆಸ್ಪತ್ರೆ | 13-12-2023 |
| 2 | ಬೆಳಗಾವಿ | ಇಕ್ರಾ ಆಸ್ಪತ್ರೆ, ಗೋಕಾಕ | 15-07-2024 |
| 3 | ಮಂಡ್ಯ | ಖಾಸಗಿ ಮನೆ, ನಾಗಮಂಗಲ | 15-08-2024 |
| 4 | ಕೋಲಾರ | ದೀಪಕ್ ನರ್ಸಿಂಗ್ ಹೋಂ | 29-10-2024 |

**ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕೆಳಕಾಣಿಸಿದಂತೆ ಅರಿವು ಮೂಡಿಸಲಾಗುತ್ತಿದೆ.**

- 2023-24 ನೇ ಸಾಲಿನಲ್ಲಿ ಬಸ್ ಬ್ರ್ಯಾಂಡಿಂಗ್, ಟ್ರೈನ್ ಬ್ರ್ಯಾಂಡಿಂಗ್, ಹೋರ್ಡಿಂಗ್ಸ್, ಗೋಡೆ ಬರಹ, ರೇಡಿಯೋ ಜಿಂಗಲ್ಸ್, ಟಿ.ವಿ. ಸ್ಪಾಟ್ಸ್ ಮುಖಾಂತರ ಸಾರ್ವಜನಿಕರಿಗೆ ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆಯ ಕುರಿತು ಅರಿವು ಮೂಡಿಸಲಾಗುತ್ತಿದೆ.
- ದಿನಾಂಕ: 18-02-2024 ರಂದು ಕನ್ನಡ ಚಾನೆಲ್‌ನ ಡ್ರಾಮಾ ಜೂನಿಯರ್ಸ್ ಕಾರ್ಯಕ್ರಮದಲ್ಲಿ "ಹೆಣ್ಣು ಭ್ರೂಣ ಹತ್ಯೆ ಮಾಡದಂತೆ" ಸಾರ್ವಜನಿಕರಲ್ಲಿ ಜನಜಾಗೃತಿ ಹಾಗೂ ಅರಿವು ಮೂಡಿಸುವ ಕಾರ್ಯಕ್ರಮವನ್ನು ನಡೆಸಲಾಯಿತು.
- ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯ ಬಗ್ಗೆ ರಾಜ್ಯ ಮಟ್ಟದಿಂದ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಕಾಲಾನುಕಾಲಕ್ಕೆ ಅರಿವು ಮೂಡಿಸುವ ಕಾರ್ಯಾಗಾರವನ್ನು ನಡೆಸಲಾಗುತ್ತಿದೆ.

**ಉಪ ನಿರ್ದೇಶಕರು (ಪಿ.ಸಿ&ಪಿ.ಎನ್.ಡಿ.ಟಿ)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು**